ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕೋವಿಡ್ -19 ಕಾಯಿಲೆಗೆ ತುತ್ತಾದವರಿಗೆ ಪರಿಹಾರ ನೀಡುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

82 (87) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಮಹಾಮಾರಿ

ಕೋವಿಡ್-19 ಕಾಯಿಲೆಗೆ ತುತ್ತಾಗಿ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ ಎಷ್ಟು; ಇವರ ಚಿಕಿತ್ಸೆಗಾಗಿ ಸರ್ಕಾರವು ಭರಿಸಿರುವ ವೆಚ್ಚವೆಷ್ಟು; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಮಹಾಮಾರಿ ಕೋವಿಡ್ -19 ಕಾಯಿಲೆಗೆ ತುತ್ತಾಗಿ ಮೃತರಾದವರ ಸಂಖ್ಯೆ ಎಷ್ಟು; ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ಪರಿಹಾರವನ್ನು ವಿತರಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರವು ಮಹಾಮಾರಿ ಕೋವಿಡ್-19 ಕಾಯಿಲೆಗೆ ತುತ್ತಾದ ಸಂತ್ರಸ್ತರಿಗೆ ಪರಿಹಾರ ನೀಡುತ್ತಿದೆಯೇ; ನೀಡುತ್ತಿದ್ದಲ್ಲಿ, ಪರಿಹಾರವನ್ನು ನೀಡಲು ಅನುಸರಿಸುತ್ತಿರುವ ಮಾರ್ಗಸೂಚಿಗಳೇನು? (ಸಂಪೂರ್ಣ ವಿವರ ನೀಡುವುದು)